159 ಎಲ್ (62)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ಇವರು ನಿಯಮ-330ರಡಿ ಗಮನ ಸೆಳೆದಿರುವ ಸೂಚನೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹೇಳಿಕೆ**

**ಪ್ರಶ್ನೆ:**

ವಿಶ್ವಗುರು ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ವಿಧಾನಸೌಧದ ಮುಂದೆ ಸ್ಥಾಪಿಸಲು ನಮ್ಮ ಸಮುದಾಯದವರು ಕಳೆದ ಹಲವು ವರ್ಷಗಳಿಂದ ಸರ್ಕಾರವನ್ನು ಆಗ್ರಹಿಸುತ್ತಿದ್ದಾರೆ. ಆದರೆ ಈ ವಿಷಯವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸದೆ. ಒಂದೊಂದು ಸದನದಲ್ಲಿ ಒಂದೊಂದು ಹಾರಿಕೆ ಉತ್ತರ ನೀಡಿ ಈ ಸಮಾಜಕ್ಕೆ ಅವಮಾನ ಮಾಡಿ ನಮ್ಮ ಸಮಾಜವನ್ನು ಕಡೆಗಣಿಸಿರುವುದಲ್ಲದೆ ಸದನದ ಘನತೆಗೆ ಚ್ಯುತಿ ತಂದಿದ್ದು ಇದು ಗಂಭೀರ ಹಾಗೂ ಸಮಾಜದ ಮರ್ಯಾದಿಯ ಪ್ರಶ್ನೆಯಾಗಿದ್ದು, ಸುತ್ತೋಲೆ ನೆಪ ಬಿಟ್ಟು ವಿಧಾನಸೌಧದ ಮುಂದೆ ಪ್ರತಿಮೆ ಸ್ಥಾಪಿಸಲು ಮಾನ್ಯ ಮುಖ್ಯಮಂತ್ರಿಯವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಹೇಳಿಕೆ:**

ಹನ್ನೆರಡನೇ ಶತಮಾನದ ಸಾಮಾಜಿಕ ಕ್ರಾಂತಿಯ ಹರಿಕಾರರಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರು ಒಬ್ಬರು. ಭಿನ್ನ ಹಾಗೂ ವಿಶಿಷ್ಟ ವ್ಯಕ್ತಿತ್ವದ ಅಂಬಿಗರ ಚೌಡಯ್ಯನವರು ನೇರ ನಿರ್ಭೀತ ನುಡಿಗಳಿಗೆ ಪ್ರಸಿದ್ಧರಾಗಿದ್ದು, ಅಂಬಿಗರ ಚೌಡಯ್ಯ ಎಂಬ ಅಂಕಿತನಾಮದಿಂದಲೇ ವಚನಗಳನ್ನು ರಚಿಸಿರುತ್ತಾರೆ.

ಸರ್ಕಾರದ ಸುತ್ತೋಲೆ ಸಂಖ್ಯೆ: ಕಸಂವಾಪ್ರ 564 ಕಸದ 2012, ದಿನಾಂಕ:11.06.2012ರಲ್ಲಿ ಸರ್ಕಾರದ / ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ / ಶರಣರ, ಜನ ನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯ ವ್ಯಕ್ತಿಗಳ ಪ್ರತಿಮೆಯನ್ನು ಸ್ಥಾಪಿಸುವುದನ್ನು ನಿರ್ಬಂಧಿಸಲಾಗಿದೆ.

ಮುಂದುವರೆದು, ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾದ SLP(C) ಸಂಖ್ಯೆ 8519/2006ರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:18.01.2013ರಂದು ನೀಡಿರುವ ತೀರ್ಪಿನಲ್ಲಿರುವ ಒಂದು ಅಂಶವು ಈ ಕೆಳಕಂಡಂತಿರುತ್ತದೆ.

> " ........ State Government shall not grant any permission for installation of any statue or construction of any structure in public roads, pavements, sideways and other public utility places".

ಮೇಲ್ಕಂಡ ಸುತ್ತೋಲೆ ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಯಲದ ತೀರ್ಪಿನನ್ವಯ ಸಾರ್ವಜನಿಕ ಸ್ಥಳದಲ್ಲಿ ಪ್ರತಿಮೆ ಸ್ಥಾಪನೆಗೆ ಅವಕಾಶವಿರುವುದಿಲ್ಲ.

ಆದಾಗ್ಯೂ, ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ಬೆಂಗಳೂರಿನ ಮಲ್ಲತಹಳ್ಳಿಯಲ್ಲಿರುವ ಕಲಾಗ್ರಾಮದಲ್ಲಿ ಸ್ಥಾಪಿಸಲು ಕ್ರಮಕೈಗೊಳ್ಳಲಾಗುವುದು.

ಸಂಖ್ಯೆ: ಕಸಂವಾ 84 ಕವಿಸ 2026

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು